ಲಸಿಕಾಕರಣದ ಸಂಭ್ರಮಾಚರಣೆ | ಸಾಧನೆಗೆ ಹೆಮ್ಮೆ ಪಡೋಣ, ವಿಶ್ರಮಿಸುವುದು ಬೇಡ

# ಡಿಸೆಂಬರ್‌ನೊಳಗೆ ರಾಜ್ಯದಲ್ಲಿ ಶೇ. 90 ಲಸಿಕಾಕರಣ ಗುರಿ

ಹುಬ್ಬಳ್ಳಿ: ಭಾರತ ದೇಶದಲ್ಲಿ ಕಳೆದ 10 ತಿಂಗಳ ಅವಧಿಯಲ್ಲಿ 100 ಕೋಟಿ ಕೋವಿಡ್ ಲಸಿಕೆ ನೀಡಿರುವುದು ಸಾಮಾನ್ಯ ಸಾಧನೆಯಲ್ಲ. ಇದಕ್ಕಾಗಿ ಹೆಮ್ಮೆಪಡೋಣ. ಆದರೆ ವಿಶ್ರಮಿಸುವುದು ಬೇಡ. ಬರುವ ಡಿಸೆಂಬರ್ ಅಂತ್ಯದೊಳಗೆ ರಾಜ್ಯದ ಶೇ. 90ರಷ್ಟು ಅರ್ಹರಿಗೆ ಕೋವಿಡ್ ಲಸಿಕೆ ನೀಡುವ ಗುರಿ ಹೊಂದಲಾಗಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ಹುಬ್ಬಳ್ಳಿಯ ಕಿಮ್ಸ್ ಆವರಣದ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಏರ್ಪಡಿಸಿದ್ದ '100 ಕೋಟಿ ಲಸಿಕಾಕರಣ ಭಾರತ ದೇಶದ ಪಯಣ' ಹಾಗೂ ಮೊಟ್ಟ ಮೊದಲ ಬಾರಿಗೆ ಮಕ್ಕಳಲ್ಲಿ ನ್ಯುಮೋನಿಯ ತಡೆಯುವ "ನ್ಯುಮೋಕಾಕಲ್ ಕಾಂಜುಗೇಟ್ ಲಸಿಕೆ" ಸಮರ್ಪಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಳೆದ ಜನವರಿ 16ರಿಂದ ದೇಶದಲ್ಲಿ ಕೋವಿಡ್ ಲಸಿಕೆ ನೀಡಲು ಪ್ರಾರಂಭಿಸಲಾಯಿತು. ಕೇವಲ ಹತ್ತು ತಿಂಗಳ ಅವಧಿಯಲ್ಲಿ 100 ಕೋಟಿ ಲಸಿಕೆ ನೀಡಿರುವುದು ಸಾಮಾನ್ಯ ಸಾಧನೆಯಲ್ಲ.

ಇದರ ಹಿಂದೆ ವೈದ್ಯರು, ಅರೆವೈದ್ಯಕೀಯ, ಆರೋಗ್ಯ ಕಾರ್ಯಕರ್ತರ, ವಿವಿಧ ಇಲಾಖೆಗಳ ಅಧಿಕಾರಿ, ಸಿಬ್ಬಂದಿಯ ಶ್ರಮವಿದೆ. ಈ ವೇಳೆ ಅವರೆಲ್ಲರನ್ನೂ ಅಭಿನಂದಿಸುತ್ತೇನೆ ಎಂದರು.

ಇನ್ನು 3-4 ತಿಂಗಳ ಅವಧಿಯಲ್ಲಿ ಮತ್ತೆ ನೂರು ಕೋಟಿ ಲಸಿಕೆ ನೀಡುವ ಗುರಿ ಹಾಕಿಕೊಳ್ಳಲಾಗಿದೆ. ರಾಜ್ಯದಲ್ಲಿಯೂ ಡಿಸೆಂಬರ್ ಅಂತ್ಯದ ವೇಳೆಗೆ ಶೇ.90 ರಷ್ಟು ಜನರಿಗೆ ಮೊದಲ ಡೋಸ್ ಹಾಗೂ ಶೇ.70 ರಷ್ಟು ಜನರಿಗೆ ಎರಡನೇ ಡೋಸ್ ಲಸಿಕೆ ನೀಡುವ ಗುರಿಯನ್ನು ಇಟ್ಟುಕೊಳ್ಳಲಾಗಿದೆ ಎಂದು ಹೇಳಿದರು.

ಆರೋಗ್ಯ, ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ.ಸುಧಾಕರ ಅವರು ಮಾತನಾಡಿ, ರಾಜ್ಯದ ಜನ ಲಸಿಕಾಕರಣಕ್ಕೆ ಸಹಕಾರ ನೀಡಿದ್ದಾರೆ. ಅತೀ ಹೆಚ್ಚು ಲಸಿಕೆ ನೀಡಿದ ರಾಜ್ಯಗಳ ಪಟ್ಟಿಯಲ್ಲಿ ಕರ್ನಾಟಕ ಮೂರನೇ ಸ್ಥಾನದಲ್ಲಿದೆ ಎಂದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಕೈಮಗ್ಗ, ಜವಳಿ, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ಸಚಿವ ಶಂಕರ ಪಾಟೀಲ ಮುನೇನಕೊಪ್ಪ ಸೇರಿದಂತೆ ವಿವಿಧ ಮಂಡಳಿ ಅಧ್ಯಕ್ಷರು, ಅಧಿಕಾರಿ ವರ್ಗದವರಿದ್ದರು.



ಹುಬ್ಬಳ್ಳಿ ಕಿಮ್ಸ್ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ 100 ಕೋಟಿ ಲಸಿಕಾಕರಣ ಭಾರತ ದೇಶದ ಪಯಣ ಕಾರ್ಯಕ್ರಮದಲ್ಲಿ ಈ ಸಾಧನೆಗೆ ಶ್ರಮಿಸಿದ ವೈದ್ಯರು ಮತ್ತು ವೈದ್ಯಕೀಯ ಕ್ಷೇತ್ರದ ಸಿಬ್ಬಂದಿಯನ್ನು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಸಾಂಕೇತಿಕವಾಗಿ ಸನ್ಮಾನಿಸಿದರು. ಸಭಾಪತಿ ಬಸವರಾಜ ಹೊರಟ್ಟಿ, ಸಚಿವರಾದ ಡಾ.ಕೆ.ಸುಧಾಕರ, ಶಂಕರ ಪಾಟೀಲ ಮುನೇನಕೊಪ್ಪ, ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಈರಣ್ಣ ಜಡಿ, ಕಿಮ್ಸ್ ನಿರ್ದೇಶಕ ಡಾ.ರಾಮಲಿಂಗಪ್ಪ ಅಂತರತಾನಿ ಹಾಗೂ ಇತರರಿದ್ದರು.

100 ಕೋಟಿ ಲಸಿಕಾಕರಣವೇ ಸುಳ್ಳು ಎಂಬ ಮಾಜಿ ಸಿಎಂ ಸಿದ್ದರಾಮಯ್ಯ ಅವರ ಹೇಳಿಕೆಗೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಶುಕ್ರವಾರ ಇಲ್ಲಿ ತೀಕ್ಷ್ಣ ಪ್ರತಿಕ್ರಿಯೆ ನೀಡಿದರು.

ಸಿದ್ದರಾಮಯ್ಯನವರ ಈ ರೀತಿ ಹೇಳಿಕೆಗೆ ಏನು ಹೇಳೋದು, ಯಾರು ಲಸಿಕೆ ತೆಗೆದುಕೊಂಡಿದ್ದಾರೆ ಅವರೆಲ್ಲ ಎದ್ದು ನಿಂತು ಹೇಳಿ ಎಂದು ಹೇಳಲಾಗುತ್ತದೆಯೇ ಎಂದು ಪ್ರಶ್ನಿಸಿದರು.

ಸಿದ್ದರಾಮಯ್ಯನವರಂಥವರು ಇದ್ದಾರೆ ಎಂತಲೇ ಲಸಿಕಾಕರಣ ಪ್ರಕ್ರಿಯೆಯಲ್ಲಿ ಸಂಪೂರ್ಣ ದಾಖಲೀಕರಣವನ್ನು ಕೇಂದ್ರ ಸರ್ಕಾರ ಮಾಡಿದೆ. ಅದನ್ನು ಆಧರಿಸಿಯೇ 100 ಕೋಟಿ ಲಸಿಕಾಕರಣ ಘೋಷಣೆ ಮಾಡಿದೆ. ಬಿಜೆಪಿಯವರು ಹಣದಿಂದಲೇ ಚುನಾವಣೆ ಮಾಡುತ್ತಿದ್ದಾರೆ ಎಂಬುದಕ್ಕೆ ಅದು ಅವರ (ಕಾಂಗ್ರೆಸ್) ಅನುಭವ. ನಂಜನಗೂಡು, ಗುಂಡ್ಲುಪೇಟೆ, ಕುಂದಗೋಳದಲ್ಲಿ ಏನು ಮಾಡಿದ್ದಾರೆ ಎಲ್ಲವೂ ನನಗೆ ಗೊತ್ತು. ಯಾವಾಗ ವಿರೋಧ ಪಕ್ಷದಲ್ಲಿ ಇರುತ್ತಾರೋ ಅವಾಗ ಇಂತಹ ಹೇಳಿಕೆ ಕೊಡುತ್ತಾರೆ.

ಮಕ್ಕಳಿಗೆ ನೀಡುತ್ತಿರುವ ಲಸಿಕೆಗಳ ಜೊತೆಗೆ ನ್ಯುಮೋನಿಯಾ ತಡೆಯಲು 'ನ್ಯುಮೋಕಾಕಲ್ ಕಾಂಜುಗೇಟ್' ಲಸಿಕೆ ನೀಡಿಕೆಗೆ ಇದೇ ಸಂದರ್ಭದಲ್ಲಿ ಮುಖ್ಯಮಂತ್ರಿಯವರು ಚಾಲನೆ ನೀಡಿರುವುದು ಮಹತ್ವದ ಬೆಳವಣಿಗೆಯಾಗಿದೆ. ಮಕ್ಕಳ ಆರೋಗ್ಯ ಸುರಕ್ಷತೆಗೆ ಈ ಲಸಿಕೆ ಪೂರಕವಾಗಲಿದೆ.

■ ಡಾ.ಕೆ.ಸುಧಾಕರ | ಆರೋಗ್ಯ ಸಚಿವ



ಹುಬ್ಬಳ್ಳಿ ಕಿಮ್ಸ್ ಸಭಾಂಗಣದಲ್ಲಿ ಶುಕ್ರವಾರ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮೊಟ್ಟ ಮೊದಲ ಬಾರಿಗೆ ಮಕ್ಕಳಲ್ಲಿ ನ್ಯುಮೋನಿಯ ತಡೆಯುವ 'ನ್ಯುಮೋಕಾಕಲ್ ಕಾಂಜುಗೇಟ್ ಲಸಿಕೆ' ಸಮರ್ಪಿಸಲಾಯಿತು. ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಭಾಪತಿ ಬಸವರಾಜ ಹೊರಟ್ಟಿ, ಆರೋಗ್ಯ ಸಚಿವ ಡಾ.ಕೆ.ಸುಧಾಕರ, ಜವಳಿ ಸಚಿವ ಶಂಕರ ಪಾಟೀಲ ಮುನೇನಕೊಪ್ಪ,ಜಿಲ್ಲಾಧಿಕಾರಿ ನಿತೇಶ ಪಾಟೀಲ ಹಾಗೂ ಇತರರಿದ್ದರು.

ಸಂಯುಕ್ತ ಕರ್ನಾಟಕ Sat, 23 October 2021
epaper.samyukthakarnataka.com/c/63907396

## ಕಿಮ್ಸ್‌ನಲ್ಲಿ ಸಭಾಂಗಣದಲ್ಲಿ 100 ಕೋಟಿ ಲಸಿಕಾಕರಣ ಭಾರತ ದೇಶದ ಪಯಣ ಕಾರ್ಯಕ್ರಮ

# ಭಾರತದ ಸಾಧನೆಗೆ ವಿಶ್ವವೇ ಬೆರಗು; ಸಿಎಂ ಬಣ್ಣನೆ

ಹುಬ್ಬಳ್ಳಿ: ಕೋವಿಡ್ ವೈರಾಣು ಕಾಲಿಟ್ಟಾಗ ದೇಶದಲ್ಲಿ ಸಾಕಷ್ಟು ಪ್ರಮಾಣದಲ್ಲಿ ಪಿಪಿಇ ಕಿಟ್, ಮಾಸ್ಕ್, ಕೈಗವಸುಗಳಿರಲಿಲ್ಲ. ಇಂದು ಈ ಉತ್ಪನ್ನಗಳನ್ನಷ್ಟೇ ಅಲ್ಲ, ಕೋವಿಡ್ ಲಸಿಕೆಯನ್ನು ಕೂಡ ರಫ್ತು ಮಾಡುವ ಸಾಮರ್ಥ್ಯ ನಮ್ಮ ದೇಶ ಗಳಿಸಿಕೊಂಡಿದೆ. ಭಾರತದ ಈ ಸಾಧನೆಗೆ ವಿಶ್ವವೇ ಬೆರಗಾಗಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದರು.

ನಗರದ ಕಿಮ್ಸ್ ಆವರಣದ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಪಂ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಏರ್ಪಡಿಸಿದ್ದ 100 ಕೋಟಿ ಲಸಿಕಾಕರಣ ಭಾರತ ದೇಶದ ಪಯಣ ಕಾರ್ಯಕ್ರಮ ಹಾಗೂ ಮೊಟ್ಟ ಮೊದಲ ಬಾರಿಗೆ ಮಕ್ಕಳಲ್ಲಿ ನ್ಯುಮೋನಿಯ ತಡೆಯುವ "ನ್ಯುಮೋಕಾಕಲ್ ಕಾಂಜುಗೇಟ್ ಲಸಿಕೆ" ಸಮರ್ಪಣೆ ಮಾಡಿ ಅವರು ಮಾತನಾಡಿದರು.

ಕೋವಿಡ್ ಅಲೆ ಎದುರಿಸುವ ಕಾರ್ಯವು ರಾಜ್ಯ ಮತ್ತು ದೇಶದ ಆರೋಗ್ಯ ವ್ಯವಸ್ಥೆಯ ಸಾಮರ್ಥ್ಯ ಮತ್ತು ಕೊರತೆಗಳೆರಡನ್ನೂ ಪರಿಚಯಿಸಿದೆ. ವಿಪತ್ತನ್ನು ಕೂಡ ಅವಕಾಶವನ್ನಾಗಿ ಪರಿವರ್ತಿಸಿಕೊಳ್ಳಬೇಕು ಎಂಬ ಮಾತನ್ನು ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ದೇಶ ನಿಜ ಮಾಡಿ ತೋರಿಸಿದೆ ಎಂದರು.



ಹುಬ್ಬಳ್ಳಿಯ ಕಿಮ್ಸ್ ಆವರಣದ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಪಂ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಹಯೋಗದಲ್ಲಿ ಏರ್ಪಡಿಸಿದ್ದ 100 ಕೋಟಿ ಲಸಿಕಾಕರಣ ಭಾರತ ದೇಶದ ಪಯಣ ಕಾರ್ಯಕ್ರಮವನ್ನು ಸಿಎಂ ಬಸವರಾಜ ಬೊಮ್ಮಾಯಿ ಉದ್ಘಾಟಿಸಿದರು.

### ಕಿಮ್ಸ್ ಸೇವೆ ಶ್ಲಾಘನೆ

ಉತ್ತರ ಕರ್ನಾಟಕದ ಹೆಮ್ಮೆಯ ಹಾಗೂ ಬಡವರ ಪಾಲಿನ ಸಂಜೀವಿನಿ ಎಂದೇ ಹೆಸರಾಗಿರುವ ಹುಬ್ಬಳ್ಳಿಯ ಕರ್ನಾಟಕ ವೈದ್ಯಕೀಯ ವಿಜ್ಞಾನ ಸಂಸ್ಥೆ(ಕಿಮ್ಸ್)ಯನ್ನು ಈ ಪ್ರದೇಶದ 6 ರಿಂದ 7 ಜಿಲ್ಲೆಗಳು ಅವಲಂಬಿಸಿವೆ. ಕೋವಿಡ್ ಮೊದಲ ಮತ್ತು ಎರಡನೇ ಅವಧಿಯಲ್ಲಿ ಕಿಮ್ಸ್ ನೀಡಿದ ಸೇವೆ ಶ್ಲಾಘನೀಯವಾಗಿದೆ. ಈ ಸಂಸ್ಥೆ ತನ್ನ ಒಟ್ಟು ಸಾಮರ್ಥ್ಯವನ್ನು ಕ್ರೋಢೀಕರಿಸಿ ಸೇವೆ ನೀಡಿದ ಪರಿಣಾಮ ಸಾವಿರಾರು ಜನರ ಪ್ರಾಣ ಉಳಿದಿದೆ. ಬ್ಲ್ಯಾಕ್ ಫಂಗಸ್ ಖಾಯಿಲೆಗೂ ಕೂಡ ಕಿಮ್ಸ್‌ನಲ್ಲಿ ಪರಿಣಾಮಕಾರಿ ಚಿಕಿತ್ಸೆ ದೊರೆತಿದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮುಕ್ತಕಂಠದಿಂದ ಶ್ಲಾಘಿಸಿದರು.

ಲಸಿಕಾಕರಣಕ್ಕೆ ಶ್ರಮಿಸಿದ ವೈದ್ಯರು ಹಾಗೂ ಆರೋಗ್ಯ ಇಲಾಖೆಯ ಎಲ್ಲಾ ಹಂತಗಳ ಅಧಿಕಾರಿಗಳು, ಸಿಬ್ಬಂದಿಯನ್ನು ಗೌರವಿಸುವದರ ಸಂಕೇತವಾಗಿ ಎಲ್ಲಾ ದರ್ಜೆಯ ಅಧಿಕಾರಿ ಹಾಗೂ ಸಿಬ್ಬಂದಿಯ ಪ್ರತಿನಿಧಿಗಳನ್ನು ಮುಖ್ಯಮಂತ್ರಿಗಳು ಸನ್ಮಾನಿಸಿದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಆರೋಗ್ಯ ಸಚಿವ ಡಾ. ಕೆ. ಸುಧಾಕರ್, ಸಕ್ಕರೆ ಸಚಿವ ಶಂಕರಪಾಟೀಲ ಮುನೇನಕೊಪ್ಪ, ರಾಜ್ಯ ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಈರಣ್ಣ ಜಡಿ, ರೇಷ್ಮೆ ಮಾರಾಟ ಮಂಡಳಿ ಅಧ್ಯಕ್ಷೆ ಸವಿತಾ ಅಮರಶೆಟ್ಟಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ನಾಗೇಶ ಕಲಬುರ್ಗಿ, ವೈದ್ಯಕೀಯ ಶಿಕ್ಷಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ನವೀನರಾಜ್‌ಸಿಂಗ್, ಆರೋಗ್ಯ ಇಲಾಖೆಯ ಆಯುಕ್ತ ಡಾ. ರಂದೀಪ್, ರಾಷ್ಟ್ರೀಯ ಆರೋಗ್ಯ ಮಿಷನ್ ವ್ಯವಸ್ಥಾಪಕ ನಿರ್ದೇಶಕಿ ಡಾ. ಅರುಂಧತಿ, ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಹುಬ್ಬಳ್ಳಿ ಧಾರವಾಡ ಪೊಲೀಸ್ ಆಯುಕ್ತ ಲಾಭೂರಾಮ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಬಿ. ಸುಶೀಲ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಡಾ. ಪ್ರಭು ಬಿರಾದಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಯಶವಂತ ಮದೀನಕರ್, ಕಿಮ್ಸ್ ಮುಖ್ಯ ಆಡಳಿತಾಧಿಕಾರಿ ರಾಜಶ್ರೀ ಜೈನಾಪುರ, ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ. ಎಸ್.ಎಂ. ಹೊನಕೇರಿ ಮತ್ತಿತರರು ಉಪಸ್ಥಿತರಿದ್ದರು. ಕಿಮ್ಸ್ ನಿರ್ದೇಶಕ ಡಾ. ರಾಮಲಿಂಗಪ್ಪ ಅಂಟರತಾನಿ ಸ್ವಾಗತಿಸಿದರು. ಡಾ. ರಾಜಶೇಖರ ದ್ಯಾಬೇರಿ ನಿರೂಪಿಸಿದರು.

ಸಂಯುಕ್ತ ಕರ್ನಾಟಕ Sat, 23 October 2021
epaper.samyukthakarnataka.com/c/63907360

# ಒಗ್ಗಟ್ಟಿನಿಂದ ಮಾತ್ರ ಸಮಾಜದ ಏಳಿಗೆ: ಹೊರಟ್ಟಿ

**ಕುಂದಗೋಳ:** ಒಗ್ಗಟ್ಟು ಹಾಗೂ ಸಹಬಾಳ್ವೆ ಮತ್ತು ಒಮ್ಮತ ಮನಸ್ಸಿದ್ದರೆ ಮಾತ್ರ, ಸಮಾಜದಲ್ಲಿ ಒಳ್ಳೆಯ ಕಾರ್ಯಗಳು ಆಗಲು ಸಾಧ್ಯವಾಗುತ್ತದೆ. ಇದಕ್ಕೆ ಸಾಕ್ಷಿ ಕುಂದಗೋಳದ ಅಂಜುಮನ್ ಸಂಸ್ಥೆಯ ಶಾಧಿಮಹಲ್ ಆಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು

ಪಟ್ಟಣದ ತಹಶೀಲ್ದಾರ್ ಕಚೇರಿ ಹತ್ತಿರ ಇರುವ ಅಂಜುಮನ್ ಸಂಸ್ಥೆಯ ಸ್ಥಳದಲ್ಲಿ ಸುಮಾರು 80 ಲಕ್ಷ ಮೊತ್ತದಲ್ಲಿ ನಿರ್ಮಿಸಲಾದ ಶಾದಿ ಮಹಲ್ ಉದ್ಘಾಟಿಸಿ ಮಾತನಾಡಿ, ಕುಂದಗೋಳ ತಾಲೂಕು ಸಾಮರಸ್ಯಕ್ಕೆ ಸಾಕ್ಷಿಯಾಗಿದ್ದು, ಈ ಶಾದಿಮಹಲ್ ಎಲ್ಲಾ ಜನಾಂಗ ವರ್ಗದವರಿಗೂ ಅನುಕೂಲವಾಗಲಿ. ಅಗತ್ಯ ಬಿದ್ದಲ್ಲಿ ಸರಕಾರ ಮಟ್ಟದಲ್ಲಿ ನನ್ನ ಸಹಕಾರ ನಿಮ್ಮೊಂದಿಗೆ ಯಾವತ್ತಿಗೂ ಇರುತ್ತದೆ ಎಂದು ಹೇಳಿದರು.

ಮಾಜಿ ಶಾಸಕ ಮಲ್ಲಿಕಾರ್ಜುನ ಅಕ್ಕಿ, ಶಿವಾನಂದ ಬೆಂತೂರ, ಎಚ್.ಎಲ್. ನದಾಫ್ ಮಾತನಾಡಿದರು. ಅಂಜುಮನ್ ಸಮಿತಿ ಅಧ್ಯಕ್ಷ ರಾಯೇಸಾಬ್ ಕಳ್ಳಿಮನಿ ಅಧ್ಯಕ್ಷತೆ ವಹಿಸಿದ್ದರು. ಮಾಜಿ ಶಾಸಕ ಎಸ್.ಐ. ಚಿಕ್ಕನಗೌಡ್ರ, ಅರವಿಂದ ಕಟಗಿ, ವಾಗೀಶ ಗಂಗಾಯಿ, ಬಾಬಾಜಾನ ಮಿಶ್ರಿಕೋಟಿ, ಮಲ್ಲಿಕಾರ್ಜುನ ಕಿರೇಸೂರ, ಸಲೀಮ ಕ್ಯಾಲಕೊಂಡ, ಇಸ್ಮಾಯಿಲ್ ಪಠಾಣ, ಎ.ಟಿ. ಹುಬ್ಬಳ್ಳಿ, ಭಾಗವಹಿಸಿದ್ದರು.



ಕುಂದಗೋಳದಲ್ಲಿನ ಅಜುಂಮನ್ ಸಂಸ್ಥೆಯಿಂದ ನಿರ್ಮಿಸಲಾದ ಶಾದಿಮಹಲ್‌ನ್ನು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಉದ್ಘಾಟಿಸಿದರು.

ಸಂಯುಕ್ತ ಕರ್ನಾಟಕ Sat, 23 October 20
epaper.samyukthaka